**National**
**Kannada**
**23.02.2025 13.10 p.m.**
**ಆಕಾಶವಾಣಿ, ಬೆಂಗಳೂರು**

# ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

1. ಬಾಹ್ಯಾಕಾಶ, ಕೃತಕ ಬುದ್ಧಿಮತ್ತೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಹೆಚ್ಚುತ್ತಿರುವ ಯುವ ಪೀಳಿಗೆಯ ಪಾಲ್ಗೊಳ್ಳುವಿಕೆಯಿಂದ ದೇಶದಲ್ಲಿ ಹೊಸ ಕ್ರಾಂತಿ– ಮನದ ಮಾತಿನಲ್ಲಿ ಪ್ರಧಾನಿ ನರೇಂದ್ರ ಮೋದಿ
2. ಸದೃಢ ರಾಷ್ಟ್ರ ನಿರ್ಮಾಣದ ಹಾದಿಯಲ್ಲಿ ಸ್ಥೂಲಕಾಯತೆಯನ್ನು ಎದುರಿಸಲು ಅಡುಗೆಯಲ್ಲಿ ಶೇಕಡ 10 ರಷ್ಟು ಎಣ್ಣೆ ಕಡಿಮೆ ಬಳಸಲು ಪ್ರಧಾನಿ ಸಲಹೆ
3. ಕರ್ನಾಟಕದ ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಹುಲಿಗಳ ಸಂಖ್ಯೆಯಲ್ಲಿ ಹೆಚ್ಚಳ ಕುರಿತು ಪ್ರಧಾನಿ ಶ್ಲಾಘನೆ
4. ನಾಲ್ಕು ದಿನಗಳ ಭೇಟಿಗಾಗಿ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಫ್ರಾನ್ಸ್‌ಗೆ ಪ್ರವಾಸ; ರಕ್ಷಣಾ ಸಹಕಾರ ಬಲವರ್ಧನೆಗೆ ಒತ್ತು
5. ಐಸಿಸಿ ಚಾಂಪಿಯನ್ಸ್ ಟ್ರೋಫಿ; ದುಬೈನಲ್ಲಿಂದು ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನ ವಿರುದ್ಧ ಭಾರತ ಸೆಣಸು

****************

ಬಾಹ್ಯಾಕಾಶ, ಕೃತಕ ಬುದ್ಧಿಮತ್ತೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಯುವ ಪೀಳಿಗೆಯ ಹೆಚ್ಚಿತ್ತಿರುವ ಪಾಲ್ಗೊಳ್ಳುವಿಕೆ, ದೇಶದಲ್ಲಿ ಹೊಸ ಕ್ರಾಂತಿಯನ್ನುಂಟು ಮಾಡಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ.

ಇಂದು ಬೆಳಗ್ಗೆ ತಮ್ಮ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದ 119ನೇ ಆವೃತ್ತಿಯಲ್ಲಿ ಸಮಸ್ತ ಭಾರತೀಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಅವರು ಹಲವು ಪ್ರಮುಖ ವಿಷಯಗಳನ್ನು ಪ್ರಸ್ತಾಪಿಸಿದರು.

ಮೊದಲಿಗೆ, ಪ್ರಸ್ತುತ ನಡೆಯುತ್ತಿರುವ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್ ಪಂದ್ಯಾವಳಿಯನ್ನು ಉಲ್ಲೇಖಿಸಿ, ಎಲ್ಲೆಡೆ ಕ್ರಿಕೆಟ್ ವಾತಾವರಣವಿದೆ ಎಂದ ಅವರು, ಕ್ರಿಕೆಟ್ ಜಗತ್ತಿನಲ್ಲಿ ಶತಕದ ರೋಮಾಂಚನದ ಕುರಿತು ಪ್ರಸ್ತಾಪಿಸಿ, ಬಾಹ್ಯಾಕಾಶ ಕ್ಷೇತ್ರದಲ್ಲಿ ಇಸ್ರೋ 100ನೇ ರಾಕೆಟ್ ಉಡಾವಣೆ ಮೂಲಕ ಸಾಧಿಸಿರುವ ಶತಕದ ಕುರಿತು ಹರ್ಷ ವ್ಯಕ್ತಪಡಿಸಿದರು.

ಉಡಾವಣಾ ವಾಹನಗಳ ತಯಾರಿಕೆ, ಚಂದ್ರಯಾನ, ಮಂಗಳಯಾನ, ಆದಿತ್ಯ ಎಲ್ –1 ರ ಯಶಸ್ಸು ಅಥವಾ ಒಂದೇ ರಾಕೆಟ್ ಮೂಲಕ 104 ಉಪಗ್ರಹಗಳನ್ನು ಒಂದೇ ಬಾರಿಗೆ ಬಾಹ್ಯಾಕಾಶಕ್ಕೆ ಕಳುಹಿಸುವ ಅಭೂತಪೂರ್ವ ಧ್ಯೇಯವಾಗಲಿ – ಇಸ್ರೋ ಯಶಸ್ಸಿನ ವ್ಯಾಪ್ತಿ ಸಾಕಷ್ಟು ವಿಸ್ತಾರವಾಗಿದೆ. ಕಳೆದ 10 ವರ್ಷಗಳಲ್ಲೇ ಸುಮಾರು 460 ಉಪಗ್ರಹಗಳನ್ನು ಉಡಾವಣೆ ಮಾಡಲಾಗಿದೆ ಎಂದು ಪ್ರಧಾನಿ ತಿಳಿಸಿದರು. ಬಾಹ್ಯಾಕಾಶ ವಿಜ್ಞಾನಿಗಳ ತಂಡದಲ್ಲಿ ಹೆಚ್ಚುತ್ತಿರುವ ನಾರೀ ಶಕ್ತಿಯ ಪಾಲ್ಗೊಳ್ಳುವಿಕೆ ಹಾಗೂ ಬಾಹ್ಯಾಕಾಶ ವಲಯ ಯುವಪೀಳಿಗೆಯ ಅಚ್ಚುಮೆಚ್ಚಿನ ಕ್ಷೇತ್ರವಾಗುತ್ತಿರುವ ಕುರಿತು ಸಂತಸ ವ್ಯಕ್ತಪಡಿಸಿದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ, ಸ್ಪೇಸ್

ಇದೇ 28 ರಂದು ಆಚರಿಸಲಾಗುವ 'ರಾಷ್ಟ್ರೀಯ ವಿಜ್ಞಾನ ದಿನದ' ಬಗ್ಗೆ ತಿಳಿಸಿದ ಅವರು, ಮಕ್ಕಳು ಮತ್ತು ಯುವಕರು ವಿಜ್ಞಾನದಲ್ಲಿ ಆಸಕ್ತಿ ಮತ್ತು ಅಭಿರುಚಿ ಹೊಂದುವುದು ಬಹಳ ಮುಖ್ಯ. ಆದ್ದರಿಂದ ಈ ದಿನವನ್ನು 'ವಿಜ್ಞಾನಿಯಾಗಿ ಒಂದು ದಿನ' ಎಂದು ಕರೆದು ಆ ದಿನ, ಮಕ್ಕಳು ಹಾಗೂ ಯುವಕರು, ಸಂಶೋಧನಾ ಪ್ರಯೋಗಾಲಯ, ತಾರಾಲಯ ಅಥವಾ ಬಾಹ್ಯಾಕಾಶ ಕೇಂದ್ರದಂತಹ ಪ್ರದೇಶಗಳಿಗೆ ಭೇಟಿ ನೀಡುವಂತೆ ಕರೆ ನೀಡಿದರು.

ಇದೇ ವೇಳೆ ಬಾಹ್ಯಾಕಾಶ, ವಿಜ್ಞಾನದಂತಹ ಕ್ಷೇತ್ರಗಳ ಜೊತೆಗೆ ಕೃತಕ ಬುದ್ಧಿಮತ್ತೆಯಲ್ಲಿ ಕ್ಷಿಪ್ರಗತಿಯ ಪ್ರಗತಿಯನ್ನು ಭಾರತ ಸಾಧಿಸುತ್ತಿದೆ ಎಂದ ಪ್ರಧಾನಿ, ಈ ಪ್ರಗತಿಯನ್ನು ಇತ್ತೀಚೆಗೆ ಪ್ಯಾರಿಸ್‌ನಲ್ಲಿ ನಡೆದ ಎಐ ಸಮ್ಮೇಳನದಲ್ಲಿ ಜಗತ್ತು ಪ್ರಶಂಸಿದೆ ಎಂದರು.

ಎಐ ನ ವಿವಿಧ ರೀತಿಯ ಬಳಕೆಯ ಉದಾಹರಣೆ ನೀಡಿದ ಅವರು, ತೆಲಂಗಾಣದ ಆದಿಲಾಬಾದ್ ನ ಸರ್ಕಾರಿ ಶಾಲೆಯ ತೋಡಸಮ್ ಕೈಲಾಶ್ ಜಿ ಅವರು, ಎಐ ಸಹಾಯದೊಂದಿಗೆ ಬುಡಕಟ್ಟು ಜನಾಂಗದ ಕೊಲಾಮಿ ಭಾಷೆಯಲ್ಲಿ ಹಾಡು ಸಂಯೋಜಿಸಿರುವ ಕುರಿತು ಮಾಹಿತಿ ನೀಡಿದರು.

ಮುಂದಿನ ತಿಂಗಳು ಮಾರ್ಚ್ 8 ರಂದು ಆಚರಿಸಲಾಗುವ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಬಗ್ಗೆ ಪ್ರಸ್ತಾಪಿಸಿದ ಅವರು, ದೇವೀ ಮಹಾತ್ಮೆಯ ಶ್ಲೋಕವೊಂದನ್ನು ಪಠಿಸಿ ಸಮಸ್ತ ನಾರಿ ಶಕ್ತಿಗೆ ನಮನ ಸಲ್ಲಿಸಿದರು.

ಸ್ವಾತಂತ್ರ್ಯ ಹೋರಾಟ ಮತ್ತು ಸಂವಿಧಾನ ರಚನೆಯಲ್ಲಿ ದೇಶದ ಮಾತೃ ಶಕ್ತಿ ಪ್ರಮುಖ ಪಾತ್ರ ವಹಿಸಿದೆ ಎಂದ ಅವರು, ಸಂವಿಧಾನ ಸಭೆಯಲ್ಲಿ ರಾಷ್ಟ್ರಧ್ವಜವನ್ನು ಪ್ರಸ್ತುತ ಪಡಿಸುವಾಗ ಹಂಸಾ ಮೆಹ್ತಾ ಅವರು ಮಾಡಿದ ಭಾಷಣದ ಧ್ವನಿಮುದ್ರಣದ ತುಣುಕನ್ನು ಕೇಳುಗರಿಗೆ ಪ್ರಸ್ತುತಪಡಿಸಿದರು.

ಹಂಸ ಮೆಹ್ತಾ ಅವರು ಅಂದುಕೊಂಡಂತೆ ಇಂದು ಎಲ್ಲಾ ಕ್ಷೇತ್ರಗಳಲ್ಲಿ ಮಹಿಳೆಯರ ಕೊಡುಗೆ ವಿಸ್ತರಿಸಿರುವುದು ಗೋಚರಿಸುತ್ತದೆ ಎಂದರು.

ಮಹಿಳಾ ದಿನಕ್ಕಾಗಿ ವಿಶೇಷ ಉಪಕ್ರಮ ಘೋಷಿಸಿದ ಪ್ರಧಾನಿ, ತಮ್ಮ ಸಾಮಾಜಿಕ ಮಾಧ್ಯಮ ಖಾತೆಗಳು ಹಾಗೂ ನಮೋ ಆ್ಯಪ್ ವೇದಿಕೆಯ ಮೂಲಕ ವಿವಿಧ ಕ್ಷೇತ್ರಗಳಲ್ಲಿ ಯಶಸ್ಸು ಸಾಧಿಸಿರುವ, ತಮ್ಮದೇ ಛಾಪು ಮೂಡಿಸಿರುವ ದೇಶದ ಸ್ಫೂರ್ತಿದಾಯಕ ಮಹಿಳೆಯರು ತಮ್ಮ ಕಾರ್ಯ ಹಾಗೂ ಅನುಭವಗಳನ್ನು ದೇಶ ವಾಸಿಗಳೊಂದಿಗೆ ಹಂಚಿಕೊಳ್ಳಲು ಅವಕಾಶ ಕಲ್ಪಿಸಲಿದ್ದಾರೆ.

ಉತ್ತರಾಖಂಡದಲ್ಲಿ ನಡೆದ ರಾಷ್ಟ್ರೀಯ ಕ್ರೀಡಾಕೂಟದ ಬಗ್ಗೆ ಉಲ್ಲೇಖಿಸಿದ ಪ್ರಧಾನಿ, ಈ ಕ್ರೀಡಾಕೂಟದಲ್ಲಿ ದೇಶಾದ್ಯಂತದ 11 ಸಾವಿರಕ್ಕೂ ಹೆಚ್ಚು ಕ್ರೀಡಾಪಟುಗಳು ಅದ್ಭುತ ಪ್ರದರ್ಶನ ನೀಡಿದ್ದಾರೆ. ಇದು ಭವಿಷ್ಯದ ಪೀಳಿಗೆಗೆ ಸ್ಫೂರ್ತಿ ನೀಡುವುದರ ಜೊತೆಗೆ, ಉತ್ಕೃಷ್ಟ ಸಂಸ್ಕೃತಿಗೆ ಉತ್ತೇಜನ ನೀಡುತ್ತದೆ ಎಂದರು.

ಇದೇ ವೇಳೆ ಅವರು, ಕ್ರೀಡಾಕೂಟದಲ್ಲಿ ಅದ್ಭುತ ಪ್ರದರ್ಶನ ತೋರಿದ ಕರ್ನಾಟಕದ ಈಜುಗಾರ್ತಿ ಧಿನಿಧಿ ದೇಸಿಂಗು, ಹಿಮಾಚಲ ಪ್ರದೇಶದ ಸಾವನ್ ಬರವಾಲ್, ಮಹಾರಾಷ್ಟ್ರದ ಕಿರಣ್ ಮಾತ್ರೇ, ತೇಜಸ್ ಶಿರಸೇ ಆಂಧ್ರ ಪ್ರದೇಶದ ಜ್ಯೋತಿ ಯಾರಾಜಿ ಸೇರಿದಂತೆ ಹಲವು ರಾಜ್ಯಗಳ ಕ್ರೀಡಾಪಟುಗಳು ದೇಶಕ್ಕೆ ಹೊಸ ಭರವಸೆ ನೀಡಿದ್ದಾರೆ. ಯುವ ಕ್ರೀಡಾಪಟುಗಳ ದೃಢನಿಶ್ಚಯ ಮತ್ತು ಶಿಸ್ತಿನಿಂದ ಭಾರತ ಇಂದು ಜಾಗತಿಕ ಕ್ರೀಡಾ ಶಕ್ತಿ ಕೇಂದ್ರವಾಗುವೆಡೆಗೆ ಕ್ಷಿಪ್ರಗತಿಯಿಂದ ಸಾಗುತ್ತಿದೆ ಎಂದರು.

ಜೀವನದಲ್ಲಿ ಕ್ರೀಡೆಯ ಮಹತ್ವದ ಬಗ್ಗೆ ಇಂದಿನ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ಪ್ರಧಾನಿ, ಸ್ಥೂಲಕಾಯತೆ ಗಂಭೀರತೆ ಕುರಿತು ಪ್ರಸ್ತಾಪಿಸಿ, ಆರೋಗ್ಯಪೂರ್ಣ ಮತ್ತು ಸದೃಢ ದೇಶದ ನಿರ್ಮಾಣದ ಹಾದಿಯಲ್ಲಿ ಸ್ಥೂಲಕಾಯತೆ ಒಂದು ಸವಾಲಾಗಿದೆ ಎಂದರು.

ಈ ಸಮಸ್ಯೆಯನ್ನು ಎದುರಿಸಲು ಒಂದು ಉಪಯುಕ್ತ ವಿಧಾನದ ಸಲಹೆ ನೀಡಿದ ಅವರು, ಅಡುಗೆಯಲ್ಲಿ ಎಣ್ಣೆಯ ಬಳಕೆಯನ್ನು ಶೇಕಡಾ 10 ರಷ್ಟು ಕಡಿಮೆ ಮಾಡುವ ನಿರ್ಧಾರ ಕೈಗೊಳ್ಳುವಂತೆ ತಿಳಿಸಿದರು.

ಬಳಿಕ ಪ್ರಧಾನಿ, ಸ್ಥೂಲಕಾಯತೆಯನ್ನು ಸಮರ್ಥವಾಗಿ ಎದುರಿಸಲು ಹಾಗೂ ಆರೋಗ್ಯಪೂರ್ಣ ಬದುಕು ಸಾಗಿಸುವ ಕುರಿತಂತೆ ಒಲಿಂಪಿಕ್ ಪದಕ ವಿಜೇತ ನೀರಜ್ ಚೋಪ್ರಾ, ಖ್ಯಾತ ಅಥ್ಲೀಟ್ ನಿಖತ್ ಜರೀನ್, ಡಾ.ದೇವಿ ಶೆಟ್ಟಿ ಅವರು ನೀಡಿರುವ ಸಲಹೆಗಳ ಧ್ವನಿ ಮುದ್ರಣಗಳನ್ನು ಕೇಳುಗರಿಗೆ ಪ್ರಸ್ತುತಪಡಿಸಿದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ಸ್ಥೂಲಕಾಯತೆ)

ಬಳಿಕ, ಜಗತ್ತಿನ ಬೇರೆಲ್ಲೂ ಸಿಗದ ಹಾಗೂ ಭಾರತದಲ್ಲಿ ಮಾತ್ರ ಸಿಗುವಂತಹ ಏಷ್ಯಾಟಿಕ್ ಸಿಂಹ, ಹಂಗುಲ್, ಪಿಗ್ಮಿ ಹಾಗ್ ಗಳು ಮತ್ತು ಸಿಂಹ–ಬಾಲದ ಮಕಾಕ್ ಕುರಿತು ಮಾತನಾಡಿದ ಅವರು, ಭಾರತ ಅತ್ಯಂತ ರೋಮಾಂಚಕ ಸಸ್ಯ ಮತ್ತು ಪ್ರಾಣಿಗಳ ಪರಿಸರ ವ್ಯವಸ್ಥೆಯನ್ನು ಹೊಂದಿದೆ ಹಾಗೂ ವನ್ಯಜೀವಿಗಳು ನಮ್ಮ ಇತಿಹಾಸ ಮತ್ತು ಸಂಸ್ಕೃತಿಯಲ್ಲಿ ಅಂತರ್ಗತವಾಗಿವೆ ಎಂದರು.

ಕರ್ನಾಟಕದಲ್ಲಿ ಹುಲಿವೇಶ, ತಮಿಳುನಾಡಿನ ಪುಲಿ ಮತ್ತು ಕೇರಳದ ಪುಲಿಕ್ಕಳಿಯಂತಹ ಅನೇಕ ಸಾಂಸ್ಕೃತಿಕ ನೃತ್ಯಗಳಿವೆ, ಅವು ಪ್ರಕೃತಿ ಮತ್ತು ವನ್ಯಜೀವಿಗಳೊಂದಿಗೆ ಸಂಬಂಧ ಹೊಂದಿವೆ. ಕರ್ನಾಟಕದ ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಹುಲಿಗಳ ಸಂಖ್ಯೆ ನಿರಂತರವಾಗಿ ಹೆಚ್ಚುತ್ತಿದೆ ಎಂದು ಹರ್ಷ ವ್ಯಕ್ತಪಡಿಸಿದ ಅವರು, ಹುಲಿಯನ್ನು ಪೂಜಿಸುವ ಸೋಲಿಗ ಬುಡಕಟ್ಟು ಜನಾಂಗದವರಿಗೆ ಇದರ ಶ್ರೇಯಸ್ಸು ಸಲ್ಲುತ್ತದೆ ಎಂದರು.

ಇದೇ ವೇಳೆ ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳೊಂದಿಗೆ ಅನೇಕ ತಲೆಮಾರುಗಳ ಸಂಬಂಧ ಹೊಂದಿರುವ ಅನುರಾಧಾ ರಾವ್, ಚಿಕ್ಕ ವಯಸ್ಸಿನಲ್ಲೇ ಪ್ರಾಣಿ ಕಲ್ಯಾಣಕ್ಕೆ ತಮ್ಮನ್ನು ತಾವು ಅರ್ಪಿಸಿಕೊಂಡ ಬಗ್ಗೆ ವಿವರಿಸಿದರು. ಮುಂದಿನ ತಿಂಗಳ ಆರಂಭದಲ್ಲಿ ವಿಶ್ವ ವನ್ಯಜೀವಿ ದಿನವನ್ನು ಆಚರಿತ್ತಿದ್ದು, ಈ ಕ್ಷೇತ್ರದಲ್ಲಿ ಈಗ ಅನೇಕ ಸ್ಟಾರ್ಟ್‌ಅಪ್‌ಗಳು ಹುಟ್ಟಿಕೊಂಡಿರುವುದು  ಸಂತಸದ ವಿಷಯ ಎಂದರು.

ಪ್ರಸ್ತುತ 10ನೇ ತರಗತಿ ಹಾಗೂ ಪಿಯುಸಿ ಸೇರಿದಂತೆ ವಿವಿಧ ಪರೀಕ್ಷೆಗಳನ್ನು ಎದುರಿಸುತ್ತಿರುವ ವಿದ್ಯಾರ್ಥಿಗಳಿಗೆ ಶುಭ ಹಾರೈಸಿರುವ ಪ್ರಧಾನಿ, ಯಾವುದೇ ಒತ್ತಡವಿಲ್ಲದೆ ಪೂರ್ಣ ಧನಾತ್ಮಕ ಮನೋಭಾವದಿಂದ ಪರೀಕ್ಷೆಯನ್ನು ಎದುರಿಸಿ ಎಂದು ಧೈರ್ಯ ತುಂಬಿದ್ದಾರೆ.

8 ಸಂಚಿಕೆಗಳಲ್ಲಿ ಮೂಡಿಬಂದ ಈ ಬಾರಿಯ 'ಪರೀಕ್ಷಾ ಪೇ ಚರ್ಚಾ' ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದ ಸಾಧಕರು ಹಾಗೂ ಕಳೆದ ವರ್ಷದ ಪರೀಕ್ಷೆಗಳಲ್ಲಿ ಉತ್ತಮ ಅಂಕ ಪಡೆದ ವಿದ್ಯಾರ್ಥಿಗಳು ತಮ್ಮ ಆಲೋಚನೆಗಳು ಮತ್ತು

ಅನುಭವಗಳನ್ನು ಎಲ್ಲರೊಂದಿಗೆ ಹಂಚಿಕೊಂಡರು. ಇದರ ಕುರಿತು ಹಲವಾರು ಪೋಷಕರು ಶ್ಲಾಘನೆ ವ್ಯಕ್ತಪಡಿಸಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಮನದ ಮಾತಿನಲ್ಲಿ ತಿಳಿಸಿದ್ದಾರೆ.

***************

ಸ್ವಾಮಿ ದಯಾನಂದ ಸರಸ್ವತಿ ಅವರ ಜನ್ಮದಿನವಾದ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು, ಅವರಿಗೆ ಗೌರವ ನಮನ ಸಲ್ಲಿಸಿದ್ದಾರೆ.

ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್ ಮಾಡಿರುವ ಅವರು, ಸ್ವಾಮಿ ದಯಾನಂದರು ನಡೆಸಿದ ಶಿಕ್ಷಣ ಮತ್ತು ಸಾಮಾಜಿಕ ಸುಧಾರಣಾ ಕಾರ್ಯಕ್ರಮಗಳು ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆಯನ್ನು ತರುವಲ್ಲಿ ಪ್ರಮುಖ ಪಾತ್ರ ವಹಿಸಿವೆ ಎಂದರು. ಆಲೋಚನೆಗಳಿಂದ ಸ್ಫೂರ್ತಿ ಪಡೆದು ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡುವ ದಿಕ್ಕಿನಲ್ಲಿ ಪ್ರತಿಯೊಬ್ಬ ನಾಗರಿಕನೂ ಮುಂದುವರಿಯಬೇಕೆಂದು ರಾಷ್ಟ್ರಪತಿಗಳು ತಿಳಿಸಿದ್ದಾರೆ.

***************

ಭಾರತ–ಫ್ರಾನ್ಸ್ ರಕ್ಷಣಾ ಸಹಕಾರವನ್ನು ಬಲಪಡಿಸುವ ನಿಟ್ಟಿನಲ್ಲಿ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಅವರು ಫ್ರಾನ್ಸ್‌ಗೆ ನಾಲ್ಕು ದಿನಗಳ ಅಧಿಕೃತ ಭೇಟಿಗೆ ತೆರಳಿದ್ದಾರೆ.

ಅಲ್ಲಿ ಅವರಿಗೆ ಗೌರವ ರಕ್ಷೆ ಮೂಲಕ ಸ್ವಾಗತಿಸಲಾಗುವುದು. ನಂತರ ಅವರು, ಫ್ರಾನ್ಸ್ ಸೇನಾ ಮುಖ್ಯಸ್ಥ ಜನರಲ್ ಪಿಯರೆ ಅವರೊಂದಿಗೆ ಚರ್ಚೆ ನಡೆಸಲಿದ್ದಾರೆ. ನಾಳೆ ಸೇನಾ ಮುಖ್ಯಸ್ಥರು ಪ್ಯಾರಿಸ್‌ನ ಲೆಸ್ ಇನ್ವಾಲಿಡ್ಸ್‌ನಲ್ಲಿ ಫ್ರಾನ್ಸ್‌ನ ಹಿರಿಯ ಮಿಲಿಟರಿ ನಾಯಕರೊಂದಿಗೆ ಸಮಾಲೋಚನೆ ನಡೆಸಲಿದ್ದಾರೆ.

***************

ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಸಿಸಿ ಚ್ಯಾಂಪಿಯನ್ಸ್ ಟ್ರೋಫಿ ಏಕದಿನ ಕ್ರಿಕೆಟ್ ಪಂದ್ಯಾವಳಿಯ ಎ ಗುಂಪಿನ ಪಂದ್ಯದಲ್ಲಿ ಭಾರತ, ತನ್ನ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಅಪರಾಹ್ನ 2.30ಕ್ಕೆ ಆರಂಭವಾಗಲಿದೆ.

*******ಮುಕ್ತಾಯ********